ಜೆಎಸ್‌ಎಸ್ ಮಹಾವಿದ್ಯಾಪೀಠ

ಜಗದ್ಗುರು ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ, ಮೈಸೂರು

# ಜ್ಞಾನ ವಾರಿಧಿ–20

ಡಿಜಿಟಲ್ ಸಾಪ್ತಾಹಿಕ ಉಪನ್ಯಾಸ ಕಾರ್ಯಕ್ರಮ

19 ಏಪ್ರಿಲ್ 2021 * ಸೋಮವಾರ * ಸಂಜೆ 6.00

ದಿವ್ಯ ಸಾನ್ನಿಧ್ಯ

**ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು**

ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ

ಸುತ್ತೂರು ಶ್ರೀಕ್ಷೇತ್ರ

ಉಪನ್ಯಾಸ

**ಶ್ರೀ ಅರುಣ ಶಹಾಪುರ**

ವಿಧಾನಪರಿಷತ್ ಸದಸ್ಯರು

ವಿಷಯ: ರಾಷ್ಟ್ರೀಯ ಶಿಕ್ಷಣ ನೀತಿ

ಆನ್‌ಲೈನ್ ಮೂಲಕ ನೇರವಾಗಿ ವೀಕ್ಷಿಸಲು ಹಾರ್ದಿಕ ಸ್ವಾಗತ

LIVE STREAMING

YouTube http://Youtube.com/c/JSSMahavidyapeethaonline

https://www.facebook.com/JSSMVP

**ಜ್ಞಾನ ವಾರಿಧಿ** ವಿಶೇಷ ಉಪನ್ಯಾಸ ಮಾಲೆ ಕಾರ್ಯಕ್ರಮವನ್ನು 2020ರ ಡಿಸೆಂಬರ್ ತಿಂಗಳಿನಿಂದ ಪ್ರತಿ ಸೋಮವಾರ ಏರ್ಪಡಿಸಿಕೊಂಡು ಬರಲಾಗುತ್ತಿದೆ. ಕಲೆ, ಸಾಹಿತ್ಯ, ಸಂಸ್ಕೃತಿ, ವಿಜ್ಞಾನ, ತಂತ್ರಜ್ಞಾನ, ಧರ್ಮ, ಅಧ್ಯಾತ್ಮ ಮುಂತಾದ ವಿಷಯಗಳು ಮತ್ತು ಪ್ರಚಲಿತ ವಿದ್ಯಮಾನಗಳನ್ನು ಕುರಿತು ದೇಶ ಮತ್ತು ವಿದೇಶದ ವಿವಿಧ ಸಂಪನ್ಮೂಲ ವ್ಯಕ್ತಿಗಳಿಂದ ಉಪನ್ಯಾಸಗಳನ್ನು ಆಯೋಜಿಸಲಾಗುತ್ತಿದೆ.

**ಶ್ರೀ ಅರುಣ ಶಹಾಪುರರವರು** ವಿಧಾನಪರಿಷತ್ ಸದಸ್ಯರು. ಉತ್ತಮ ವಾಗ್ಮಿಗಳು. ಯುವ ರಾಜಕಾರಣಿಗಳು. ಜನಪರ ಕಾಳಜಿಯುಳ್ಳವರು. ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗಾಗಿ ನಿರಂತರವಾಗಿ ಶ್ರಮಿಸುತ್ತಿದ್ದಾರೆ. 2010ರಿಂದ ಕರ್ನಾಟಕ ವಾಯುವ್ಯ ಶಿಕ್ಷಕರ ಕ್ಷೇತ್ರವನ್ನು ಪ್ರತಿನಿಧಿಸುತ್ತಿದ್ದಾರೆ. 2016ರಲ್ಲಿ ಎರಡನೇ ಬಾರಿಗೆ ಆಯ್ಕೆಯಾಗಿದ್ದಾರೆ.

ವಿದ್ಯಾರ್ಥಿ ದೆಸೆಯಿಂದಲೇ ರಾಷ್ಟ್ರೀಯ ಸ್ವಯಂಸೇವಕ ಸಂಘ ಮತ್ತು ಅಖಿಲ ಭಾರತ ವಿದ್ಯಾರ್ಥಿ ಪರಿಷತ್ತಿನ ಕಾರ್ಯಕರ್ತರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಬೆಳಗಾವಿ ವಿಭಾಗದ ಕರ್ನಾಟಕ ರಾಜ್ಯ ಮಾಧ್ಯಮಿಕ ಶಿಕ್ಷಕ ಸಂಘದ ಪ್ರಮುಖ್ ಆಗಿ, ನಂತರ ಕಾರ್ಯಾಧ್ಯಕ್ಷರಾಗಿದ್ದಾರೆ. ಮಹಾವಿದ್ಯಾಲಯ ಶಿಕ್ಷಕ ಸಂಘದ ಗೌರವಾಧ್ಯಕ್ಷರೂ ಆಗಿದ್ದಾರೆ. ಕರ್ನಾಟಕ ಸರ್ಕಾರದ ರಾಷ್ಟ್ರೀಯ ಶಿಕ್ಷಣ ನೀತಿಯ ಕಾರ್ಯಪಡೆಯ ಸದಸ್ಯರಾಗಿಯೂ ಜವಾಬ್ದಾರಿ ನಿರ್ವಹಿಸುತ್ತಿದ್ದಾರೆ. ಶಿಕ್ಷಣ ಮತ್ತು ಶಿಕ್ಷಕರ ಸಮಸ್ಯೆಗಳನ್ನು ಅಮೂಲಾಗ್ರವಾಗಿ ಅಭ್ಯಸಿಸಿ ಪರಿಹಾರ ದೊರಕಿಸುವ ನಿಟ್ಟಿನಲ್ಲಿ ಶ್ರಮಿಸುತ್ತಿದ್ದಾರೆ. ರಾಜಕೀಯ ಕ್ಷೇತ್ರದಲ್ಲಿ ಸದಾ ಸಕ್ರಿಯರಾಗಿದ್ದು ಯುವರಾಜಕಾರಣಿಗಳಿಗೆ ಮಾದರಿಯಾಗುವಂತೆ ಕ್ರಿಯಾಶೀಲ ಕಾರ್ಯಗಳನ್ನು ನಿರ್ವಹಿಸುತ್ತಿದ್ದಾರೆ.

**ಜ್ಞಾನ ವಾರಿಧಿ–21 * 26 ಏಪ್ರಿಲ್ 2021**

**ಡಾ. ಈಶ್ವರ ಮಂಟೂರ**

**ಪ್ರವಚನಕಾರರು ಹಾಗೂ ಅಧ್ಯಕ್ಷರು, ಬಸವಜ್ಞಾನ ಗುರುಕುಲ**
**ಹುನ್ನೂರ–ಮಧುರಖಂಡಿ**

**ವಿಷಯ: ಮಾನವೀಯ ಮೌಲ್ಯಗಳು**